ಕರ್ನಾಟಕ ಸರ್ಕಾರ

# ಭ್ರಷ್ಟಾಚಾರ ನಿಗ್ರಹ ದಳ

## ಪತ್ರಿಕಾ ಪ್ರಕಟಣೆ

ದಿನಾಂಕ:23/03/2019.

ಕೋಲಾರ ಜಿಲ್ಲೆ, ವೇಮಗಲ್ ಹೋಬಳಿ, ಧನಮಟ್ನಹಳ್ಳಿ ಗ್ರಾಮದ ನಿವಾಸಿಯೊಬ್ಬರು ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾ (ಎ) ಪಕ್ಷದಿಂದ ಕೋಲಾರ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿ ಸ್ಪರ್ಧಿಸಲು ಮತದಾರರ ಪಟ್ಟಿಯಲ್ಲಿ ಭಾವಚಿತ್ರವಿರುವ ಗುರುತಿನ ಚೀಟಿಗಳ ನಕಲು ಪ್ರತಿಗಳನ್ನು ದೃಢೀಕರಿಸಿ ನೀಡಲು ತಹಸೀಲ್ದಾರ್, ಕೋಲಾರ ರವರ ಕಛೇರಿಗೆ ಅರ್ಜಿಯನ್ನು ಸಲ್ಲಿಸಿರುತ್ತಾರೆ. ಶ್ರೀ.ವೈ.ಶಂಕರ ರೆಡ್ಡಿ, ಪ್ರಥಮ ದರ್ಜೆ ಸಹಾಯಕ, ಚುನಾವಣಾ ಶಾಖೆ, ಕೋಲಾರ ತಾಲ್ಲೂಕು ರವರು ರೂ.3,000/- ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:23/03/2019 ರಂದು ಶ್ರೀ.ವೈ.ಶಂಕರ ರೆಡ್ಡಿ ರವರು ದೂರುದಾರರಿಂದ ರೂ.3,000/- ಲಂಚದ ಹಣವನ್ನು ಸ್ವೀಕರಿಸುತ್ತಿದ ಸಂದರ್ಭದಲ್ಲಿ ಕೋಲಾರ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆ. ಆರೋಪಿಯನ್ನು ದಸ್ತಗಿರಿ ಮಾಡಿ, ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ, ತನಿಖೆ ಮುಂದುವರೆದಿದೆ.